# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಬೆಳ್ತಂಗಡಿ

## ಸಿಸಿ ಸಂಖ್ಯೆ: 2348/2023

| | | |
|---|---|---|
| ಹೆಸರು | : | ಸಂತೋಷ್ |
| ತಂದೆಯ ಹೆಸರು | : | ಚಂದಪ್ಪ ಗೌಡ |
| ಫ್ರಾಯ | : | 34 ವರ್ಷ |
| ಉದ್ಯೋಗ | : | ಕೂಲಿ ಕೆಲಸ |
| ವಾಸ | : | ಕಿಲ್ಲೂರು, ಬೆಳ್ತಂಗಡಿ ತಾಲೂಕು |

**ದಿನಾಂಕ 30.05.2025 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾಗಿ ಪ್ರಮಾಣವಚನ ಭೋಧಿಸಲಾಯಿತು.**

ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ

ಸಾಕ್ಷಿಗೆ ನಿಪಿ7 ಮತ್ತು 8 ನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಗಳನ್ನು ನಿಪಿ–7(ಬಿ) ಮತ್ತು 8(ಬಿ)ಎಂದು ಗುರುತಿಸಲಾಯಿತು. ನಿಪಿ7 ಮತ್ತು 8 ಕ್ಕೆ ಎಷ್ಟು ವರ್ಷದ ಹಿಂದೆ ಎಲ್ಲಿ ಸಹಿ ಮಾಡಿದ್ದೇನೆ ಎಂದು ನೆನಪಿಲ್ಲ. ಆ ಸಮಯದಲ್ಲಿ ನನ್ನ ಜೊತೆ ಯಾರು ಇರಲಿಲ್ಲ. ಅಲ್ಲದೆ ಸದರಿ ದಾಖಲೆಗಳಿಗೆ ಯಾವ ಸ್ಥಳದಲ್ಲಿ ಸಹಿ ಮಾಡಿದ್ದೇನೆ ಎಂದು ನೆನಪಿಲ್ಲ. ಪೊಲೀಸರಿಗೆ ಗೌರವ ಕೊಟ್ಟ ಸಹಿ ಮಾಡಿದ್ದೇನೆ. ನಿಪಿ7 ಮತ್ತು 8 ರಲ್ಲಿ ಬರೆದಿರುವ ವಿಚಾರಗಳನ್ನು ತಿಳಿದುಕೊಂಡಿರುವುದಿಲ್ಲ. ಸಾಕ್ಷಿಗೆ ನಿಪಿ9 ಮತ್ತು 10 ನ್ನು ತೋರಿಸಲಾಗಿ ಸದರಿ ಫೋಟೋಗಳಲ್ಲಿ ತಾವು ಇರುವುದಾಗಿ ನೋಡಿ ಗುರುತಿಸಿರುತ್ತಾರೆ. ಆ ಸಮಯದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ನನ್ನ ಸಮಕ್ಷಮದಲ್ಲಿ ಸ್ವಾಧೀನಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)

**<u>ಪಾಟೀ ಸವಾಲುಃ ಸ.ಸ.ಅ ರವರಿಂದಃ</u>**

ದಿಃ 7.5.2023 ರಂದು ಪೊಲೀಸರು ಇಂದಬೆಟ್ಟು ಗ್ರಾಮದ ಪಡಂಬಿಲ ಎಂಬಲ್ಲಿ ಮಹಜರ್ ಮಾಡಲು ಬಂದಿದ್ದರು ಎಂದರೆ ಗೊತ್ತಿಲ್ಲ. ಆಗ ಸ್ಥಳದಲ್ಲಿ ಚಾಸಾ6 ಮತ್ತು 7 ರವರು ಇದ್ದರು ಎಂದರೆ ಗೊತ್ತಿಲ್ಲ. 16 ಗಂಟೆಯಿಂದ 17 ಗಂಟೆಯವರೆಗೆ ಪೊಲೀಸರು ಸ್ಥಳದಲ್ಲಿ ಮಹಜರ್ ಮಾಡಿ ನಕ್ಷೆ ತಯಾರಿಸಿ ನಿಪಿ9 ಮತ್ತು 10 ರಂತೆ ಫೋಟೋವನ್ನು ತೆಗೆದು ಬಸ್ಸನ್ನು ಸಹ ಸ್ವಾಧೀನಪಡಿಸಿಕೊಂಡಿದ್ದಾರೆ ಎಂದರೆ ಸಾಕ್ಷಿ ನಾನು ಬರುವಾಗ ಬರೆದು ಆಗಿತ್ತು ಫೋಟೋವನ್ನು ಮಾತ್ರ ತೆಗೆಯುತ್ತಿದ್ದರು ಎಂದು ಹೇಳುತ್ತಾರೆ. ನಾನು 10 ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿದ್ದೇನೆ. ಯಾವುದೇ ದಾಖಲೆಗೆ ಸಹಿ ಮಾಡುವ ಪೂರ್ವದಲ್ಲಿ ಅದನ್ನು ಓದಿ ಸಹಿ ಮಾಡಬೇಕು ಎಂಬ ಸಾಮಾನ್ಯ ಪರಿಜ್ಞಾನ ಇದೆ. ನಿಪಿ7 ಮತ್ತು 8 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ತಿಳಿದಿದ್ದರೂ ಸಹ ನ್ಯಾಯಾಲಯದ ಮುಂದಿರುವ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಪ್ರಧಾನ ಸಿವಿಲ್ ನ್ಯಾಯಾಧೀಶರು
(ಸಾ.ಓ.ಹೇ.ಕೇ.ಸ.ಇ.ಎ.ಒ) ಮತ್ತು ಪ್ರ.ದ.ನ್ಯಾದಂ. ಬೆಳ್ತಂಗಡಿ